**OS No. 196/2023**
**ಪಿ.ಡಬ್ಲ್ಯೂಃ 1**

ದಿನಾಂಕ : **14-11-2025** ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ. ಜಿ. ಎಮ್. ಎಮ್ ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ. ನಾನು ದಾವೆಯ ಜೊತೆಗೆ ಕೆಲವು ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ, ಅವು ಕೆಳಗಿನಂತಿವೆಃ

1. ದಾವಾ ಆಸ್ತಿಗೆ ಸಂಬಂಧಪಟ್ಟಂತಹ ಪಹಣಿ ಪತ್ರಿಕೆಗಳನ್ನು ನಿಪಿ-1 ರಿಂದ ನಿಪಿ-20, ಮುಟೇಷನ ನಿಪಿ-21, ದಿನಾಂಕಃ 30-12-2018 ಮತ್ತು 19-09-2019 ರ ವಿಭಾಗ ಪತ್ರವನ್ನು ನಿಪಿ-22 ಮತ್ತು ನಿಪಿ-23, ವಾದ ಪತ್ರ ನಿಪಿ-24, ರಾಜಿ ಅರ್ಜಿಯನ್ನು ನಿಪಿ-25, ರಾಜಿ ಇಕ್ರಿಯನ್ನು ನಿಪಿ-26 ಎಂದು ಗುರುತಿಸಲಾಯಿತು.

**ಪ್ರತಿವಾದಿಪರ ವಕೀಲರು ಪಾಟಿ ಸವಾಲಿಗೆ ಸಮಯಾವಕಾಶ ಕೋರಿದ್ದರಿಂದ ಸಮಯಾವಕಾಶ ನೀಡಲಾಯಿತು.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ**